ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಲಬುರ್ಗಿ ವಿಶ್ವವಿದ್ಯಾಲಯಕ್ಕೆ ಮಹಾ ಮಾನವತಾವಾದಿ ಬಸವೇಶ್ವರರ ಹೆಸರನ್ನು ನಾಮಕರಣ ಮಾಡಲು ಸರ್ಕಾರ ಆಲೋಚಿಸಿದೆಯೇ;

ಆ) ಇಲ್ಲಿದಿದ್ದಲ್ಲಿ, ಈ ಬಸವೇಶ್ವರರ ಹೆಸರನ್ನು ಕಲಬುರ್ಗಿ ವಿಶ್ವವಿದ್ಯಾಲಯಕ್ಕೆ ಇಡಲು ಅಗತ್ಯ ಕ್ರಮ ಕೈಗೊಳ್ಳುತ್ತದೆಯೇ?

Dr. Parameshwar (Minister for Higher Education):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಉನ್ನತ ಶಿಕ್ಷಣಕ್ಕೆ ನೀಡುತ್ತಿರುವ ಅನುದಾನದಲ್ಲಿ ಕಡಿತ.

183(425)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಈ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು?

ಇ) 2001ನೇ ಜನವರಿಯಿಂದ ಉನ್ನತ ಶಿಕ್ಷಣಕ್ಕೆ ಶೇ.15ರಷ್ಟು ಕಡಿತ ಮಾಡಲಾಗಿದೆಯೇ?

ಈ) ಇದಕ್ಕೆ ಕಾರಣಗಳೇನು?

ಉ) ಇದರಿಂದ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿವಹಿಸುತ್ತಿರುವ ಅಧ್ಯಾಪಕರುಗಳಿಗೆ ತೊಂದರೆಯಾಗುವುದಿಲ್ಲವೇ?

ಊ) ಈ ಕಡಿತವನ್ನು ಸರ್ಕಾರ ಹಿಂತೆಗೆದುಕೊಳ್ಳುತ್ತದೆಯೇ?

Dr. G.Parameshwara (Minister of State for Higher Education Science and technology):

ಅ) 300 (292 ಪದವಿ ಕಾಲೇಜುಗಳು 8 ಕಾನೂನು ಕಾಲೇಜುಗಳು)

ಆ) 8519

ಇ) ಇಲ್ಲ. ದಿನಾಂಕ 13-2-2001 ರಿಂದ ಜಾರಿಗೆ ಬರುವಂತೆ ಶೇ. 15ರಷ್ಟು ಅನುದಾನದಲ್ಲಿ ಕಡಿತಗೊಳಿಸಲಾಗಿದೆ.

ಈ) ಅನ್ವಯಿಸುವುದಿಲ್ಲ.

ಉ) ಇಲ್ಲ. ಉದ್ಭವಿಸುವುದಿಲ್ಲ.

ಊ) ತಿದ್ದುಪಡಿ ಆದೇಶವನ್ನು ಹೊರಡಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಬೆಂಗಳೂರಿನಲ್ಲಿ ಮೂತ್ರಪಿಂಡ ಮಾರಾಟ.

184(426)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ: ಸುದರ್ಶನ್ ನೇತೃತ್ವದ ಆರೋಗ್ಯ ಕಾರ್ಯಪಡೆಯು ಬೆಂಗಳೂರಿನಲ್ಲಿ ಮೂತ್ರಪಿಂಡ ಮಾರಾಟದ ಪಿಡುಗು ಹೆಚ್ಚಾಗಿರುವ ಬಗ್ಗೆ ವರದಿ ಸಲ್ಲಿಸಿದೆಯೆ?

ಆ) ಬೆಂಗಳೂರಿನಲ್ಲಿ ಕಳೆದ ನಾಲ್ಕು ವರ್ಷಗಳಿಂದ ಎಷ್ಟು ರಕ್ತ ಸಂಬಂಧಿಗಳಿಲ್ಲದ ವ್ಯಕ್ತಿಗಳು ಮೂತ್ರಪಿಂಡ ದಾನ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) 1994ರ ಮಾನವ ಅಂಗಾಂಗಗಳ ಕಸಿ ಕಾಯಿದೆಯಲ್ಲಿ ''ಭಾವನಾತ್ಮಕ ಸಂಬಂಧಪಟ್ಟ'' ವ್ಯಕ್ತಿಗಳು ಮೂತ್ರಪಿಂಡ ದಾನ ಮಾಡಬಹುದು ಎಂಬ ಅಂಶವನ್ನು ದುರುಪಯೋಗಪಡಿಸಿಕೊಂಡು ಬೆಂಗಳೂರಿನ ಆಸ್ಪತ್ರೆಗಳಲ್ಲಿ ಮೂತ್ರಪಿಂಡ ಕಸಿ ವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಳ್ಳಲ್ಲಿರುವ ಕ್ರಮಗಳೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):